ಇ) ಕೊಪ್ಪಳ ನಗರದಲ್ಲಿ ಇಂಜಿನಿಯರಿಂಗ್ ಕಾಲೇಜನ್ನು ಈ ಶೈಕ್ಷಣಿಕ ವರ್ಷದಲ್ಲಿಯೇ ಪ್ರಾರಂಭಿಸಲಾಗುವುದೇ;

ಅನುದಾನದ ಲಭ್ಯತೆಯನ್ನು ಆಧರಿಸಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಈ) ಈ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಸ್ಥಳ ಗುರುತಿಸಿದೆಯೇ;

ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಈ ಕಾಲೇಜಿನ ನೂತನ ಕಟ್ಟಡದ ಕಾಮಗಾರಿಯನ್ನು ಸರ್ಕಾರ ಪ್ರಾರಂಬಿಸಿದೆಯೇ; ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗಿದೆ; ಇದಕ್ಕಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಪ್ರಮಾಣ ಎಷ್ಟು; (ವಿವರವನ್ನು ನೀಡುವುದು);

ಪ್ರಶ್ನೆ ಉದ್ಭವಿಸುವುದಿಲ್ಲ.

ಊ) ಈ ಇಂಜಿನಿಯರಿಂಗ್ ಕಾಲೇಜಿನ ಕಟ್ಟಡಕಾಮಗಾರಿಯನ್ನು ಪೂರ್ಣಗೊಳಿಸಲು ಕಾಲಮಿತಿಯನ್ನೇನಾದರೂ ವಿಧಿಸಿದೆಯೇ? ಹಾಗಿದ್ದಲ್ಲ, ಯಾವಾಗ ಪೂರ್ಣಗೊಳಿಲಾಗುವುದು?

ಪ್ರಶ್ನೆ ಉದ್ಭವಿಸುವುದಿಲ್ಲ.

ಇಡಿ: 47 : ಯೋಯೋಕ 2009

ಉನ್ನತ ಶಿಕ್ಷಣ ಸಚಿವರು

<u>ಕರ್ನಾಟಕ ವಿಧಾನ ಸಭೆ</u>

122 ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ(ಚಿಕ್ಕೋಡಿ ಸದಲಗ)

ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು

ಅ) ಚಿಕ್ಕೋಡಿ ತಾಲ್ಲೂಕಿನ ಖಡಕಲಾಟ ಹಾಗೂ ಇತರೆ ಗ್ರಾಮಗಳು (ಮಲ್ಟಿ ವಿಲೇಜ್) ಕುಡಿಯುವ ನೀರಿನ ಯೋಜನೆಗಳು;

ಚಿಕ್ಕೋಡಿ ತಾಲ್ಲೂಕಿನ ಖಡಕಲಾಟ್ ಹಾಗೂ ಇತರೆ 10 ಗ್ರಾಮಗಳ ಕುಡಿಯುವ ನೀರಿನ ಸರಬರಾಜು ಕಾಮಗಾರಿಯನ್ನು ಜಲ ನಿರ್ಮಲ ಯೋಜನೆಯ ಬಹು ಗ್ರಾಮ ಯೋಜನೆಯಡಿಯಲ್ಲಿ ತೆಗೆದುಕೊಳ್ಳಲಾಗಿದೆ.

ಆ) ಚಿಕ್ಕೋಡಿ ತಾಲ್ಲೂಕಿನ ಖಡಕಲಾಟ ಹಾಗೂ ಇತರೆ 11 ಗ್ರಾಮಗಳ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯು ಮಂಜೂರಾಗಿ ಎಷ್ಟು ವರ್ಷವಾಯಿತು.

ಚಿಕ್ಕೋಡಿ ತಾಲ್ಲೂಕಿನ ಖಡಕಲಾಟ ಹಾಗೂ ಇತರೆ 10 ಗ್ರಾಮಗಳ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯು ಮಂಜೂರಾಗಿ ಸುಮಾರು 2 ವರ್ಷ 9 ತಿಂಗಳುಗಳಾಗಿವೆ.

ಇ) ಈ ಕಾಮಗಾರಿಯು ಪೂರ್ಣಗೊಂಡಿದೆಯೇ;

ಈ ಕಾಮಗಾರಿಯ ಸಾಮಾನ್ಯ ಸೌಲಭ್ಯಗಳ ಸಿವಿಲ್ ಕಾಮಗಾರಿಗಳು ಫೆಬ್ರವರಿ–2008 ರಲ್ಲಿ ಪೂರ್ಣಗೊಂಡಿದ್ದು, ದಿನಾಂಕ 16–07–2008 ರಂದು ಜಂಟಿ ಸಮಿತಿಗೆ ಹಸ್ತಾಂತರಿಸಲಾಗಿದೆ. ಹಾಗೂ ಸದರಿ ಗ್ರಾಮಗಳ ಆಂತರಿಕ ಸೌಲಭ್ಯಗಳನ್ನು ಮೇಲ್ದರ್ಜೆಗೇರಿಸುವ ಕಾಮಗಾರಿಗಳು ಟೆಂಡರ್ ಪ್ರಕ್ರಿಯೆಯಲ್ಲಿರುತ್ತದೆ.

ಈ) ಹಾಗಿದ್ದಲ್ಲ, ಕಾಮಗಾರಿ ಪೂರ್ಣಗೊಳಿಸಲು ಯಾವ ಕ್ರಮ ಕೈಗೊಂಡಿದೆ;

ಯೋಜನಾ ಗ್ರಾಮಗಳ ಆಂತರಿಕ ಸೌಲಭ್ಯಗಳನ್ನು (In village Facility) ಮೇಲ್ದರ್ಜೆಗೇರಿಸಲು ಟೆಂಡರ್ ಕರೆಯಲಾಗಿದೆ.

ಉ) ಈ ಯೋಜನೆಗೆ ಒಳಪಡುವ ಗ್ರಾಮಗಳ ಗ್ರಾಮಸ್ಥರಿಗೆ ದಿನನಿತ್ಯ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುತ್ತಿದೆಯೇ?

ಹೌದು, ಕಲ್ಪಿಸಲಾಗುತ್ತಿದೆ.

ಸಂಖ್ಯೆ: ಗ್ರಾಅಪ/ಕನೀಸಂ/401/2009

(ಶೋಭಾ ಕರಂದ್ಲಾಜೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ
ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು

ಕರ್ನಾಟಕ ವಿಧಾನ ಸಭೆ

123 ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ(ಚಿಕ್ಕೋಡಿ ಸದಲಗ)

ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು

ಅ) ಚಿಕ್ಕೋಡಿ ತಾಲ್ಲೂಕಿನ ಮಾಂಜರಿ ಹಾಗೂ ಕಲ್ಲೋಳ ಗ್ರಾಮಗಳ ಜಲ ನಿರ್ಮಲ ಯೋಜನೆಗಳ ಕಾಮಗಾರಿಗಳು;

ಚಿಕ್ಕೋಡಿ ತಾಲ್ಲೂಕಿನ ಮಾಂಜರಿ ಹಾಗೂ ಕಲ್ಲೋಳ ಗ್ರಾಮಗಳ ಕುಡಿಯುವ ನೀರಿನ ಸರಬರಾಜು ಕಾಮಗಾರಿಗಳನ್ನು ಜಲ ನಿರ್ಮಲ ಯೋಜನೆಯ ಹಂತ–3 ರಡಿಯಲ್ಲಿ ತೆಗೆದುಕೊಳ್ಳಲಾಗಿದೆ.